## ಕರ್ನಾಟಕ ವಿಧಾನ ಪರಿಷತ್ತು

ಶ್ರೀ.ಯು.ಬಿ. ವೆಂಕಟೇಶ್, ಮಾನ್ಯ ವಿಧಾನ ಪರಿಷತ್‌ನ ಸದಸ್ಯರು ಇವರು ಶೂನ್ಯ ವೇಳೆಯಲ್ಲಿ ಹಸಿ ಭತ್ತ ಬಿಸಿ ಬೆಲ್ಲದ ಜಿಲ್ಲೆಯೆಂದು ಕರೆಸಿಕೊಳ್ಳುವ ಮಂಡ್ಯ ಜಿಲ್ಲೆಯಲ್ಲಿನ ಸಿಹಿ ನೀಡುವ ಆಲೆಮನೆಯಿಂದ ಕಹಿ ಸುದ್ದಿ ವರದಿಯಾದದ್ದನ್ನು ಸಮಾಜ ಜೀರ್ಣಿಸಿಕೊಳ್ಳುತ್ತಿಲ್ಲ. ದಯಮಾಡಿ ಕಾನೂನಿಗೆ ವಿರುದ್ಧವಾಗಿ ಭ್ರೂಣಪತ್ತೆ ಮತ್ತು ಹತ್ಯೆಯಂತಹ ಸಮಾಜಘಾತುಕ ಕೃತ್ಯದ ಮೂಲಕ ಸಾವಿರಾರು ಕಂದಮ್ಮಗಳ ಸಾವಿಗೆ ಕಾರಣವಾಗಿರುವ ಆರೋಪಿಗಳ ವಿರುದ್ಧ ಹಾಗೂ ಅನಧಿಕೃತ ಸ್ಕ್ಯಾನಿಂಗ್ ಸೆಂಟರ್‌ಗಳನ್ನು ನಡೆಸಿ ಅಕ್ರಮ ಗರ್ಭಪಾತ ಎಸಗಿರುವವರ ವಿರುದ್ಧ ನ್ಯಾಯಾಲಯಗಳಲ್ಲಿ ಮೊಕದ್ದಮೆಗಳನ್ನು ದಾಖಲಿಸುವ ಮೂಲಕ ಅತ್ಯಂತ ಕಠಿಣ ಕಾನೂನು ಕ್ರಮಗಳನ್ನು ಕೈಗೊಳ್ಳಬೇಕೆಂದು ಪ್ರಸ್ತಾಪಿಸಿದ ವಿಷಯಕ್ಕೆ

ಆರೋಗ್ಯ ಸಚಿವರ ಉತ್ತರ

*********

ಗರ್ಭಧಾರಣಾ ಪೂರ್ವ ಮತ್ತು ಪ್ರಸವ ಪೂರ್ವ ಪತ್ತೆ ತಂತ್ರ ವಿಧಾನಗಳ (ಲಿಂಗ ಆಯ್ಕೆ ನಿಷೇಧ) ಕಾಯ್ದೆ 1994 (ಪಿ.ಸಿ&ಪಿ.ಎನ್.ಡಿ.ಟಿ ಕಾಯ್ದೆ, 1994) ಉದ್ದೇಶವು ಹೆಣ್ಣು ಭ್ರೂಣ ಪತ್ತೆ ಮತ್ತು ಹತ್ಯೆ ಮಾಡದಂತೆ ತಡೆಗಟ್ಟುವುದು ಹಾಗೂ ಹೆಣ್ಣು ಮಕ್ಕಳ ಲಿಂಗಾನುಪಾತವನ್ನು ಹೆಚ್ಚಿಸುವುದಾಗಿದೆ.

**ಅನಧಿಕೃತ ಸ್ಕ್ಯಾನಿಂಗ್ ಸೆಂಟರ್‌ಗಳನ್ನು ನಡೆಸಿ ಅಕ್ರಮ ಗರ್ಭಪಾತ ಮತ್ತು ಹೆಣ್ಣು ಭ್ರೂಣ ಹತ್ಯೆಯನ್ನು ತಡೆಯಲು ಈ ಕೆಳಕಂಡಂತೆ ಕ್ರಮಗಳನ್ನು ಕೈಗೊಳ್ಳಲಾಗಿದೆ.**

- ಒಟ್ಟು 6395 ಸ್ಕ್ಯಾನಿಂಗ್ ಸೆಂಟರ್‌ಗಳು ನೋಂದಣಿಗೊಂಡಿದ್ದು, 6068 ಖಾಸಗಿ ಸ್ಕ್ಯಾನಿಂಗ್ ಸೆಂಟರ್‌ಗಳು ಮತ್ತು 327 ಸರ್ಕಾರಿ ಸ್ಕ್ಯಾನಿಂಗ್ ಸೆಂಟರ್‌ಗಳು ಇದ್ದು, "ಬಾಲಿಕಾ" ಸಾಫ್ಟ್‌ವೇರ್ ಮುಖಾಂತರ ಎಲ್ಲಾ ಸೆಂಟರ್‌ಗಳು ಕಡ್ಡಾಯವಾಗಿ ನೋಂದಣಿಗೊಳ್ಳಬೇಕಾಗುತ್ತದೆ.
- ಪಿ.ಸಿ&ಪಿ.ಎನ್.ಡಿ.ಟಿ. ಕಾಯ್ದೆಯಡಿ ಬರುವ ಎಲ್ಲಾ ಶಾಸನಬದ್ಧ ಸಮಿತಿಗಳು ರಾಜ್ಯ ಮತ್ತು ಜಿಲ್ಲೆಗಳಲ್ಲಿ ರಚನೆಗೊಂಡಿರುತ್ತವೆ.
- ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಗಳನ್ನು ಜಿಲ್ಲಾ ಸಕ್ಷಮ ಪ್ರಾಧಿಕಾರಿಗಳನ್ನಾಗಿ ನೇಮಿಸಿ, ಇವರ ನೇತೃತ್ವದಲ್ಲಿ ಜಿಲ್ಲಾ ಸಲಹಾ ಸಮಿತಿ, ಜಿಲ್ಲಾ ತಪಾಸಣಾ ಮತ್ತು ಮೇಲ್ವಿಚಾರಣಾ ಸಮಿತಿಗಳು ಕಾರ್ಯನಿರ್ವಹಿಸುತ್ತಿವೆ ಹಾಗೂ ಈ ಸಮಿತಿಯು ಪ್ರತಿ ಸ್ಕ್ಯಾನಿಂಗ್ ಸೆಂಟರ್‌ಗಳನ್ನು ಮೂರು ತಿಂಗಳಿಗೊಮ್ಮೆ ತಪಾಸಣೆ ನಡೆಸುತ್ತಿರುತ್ತದೆ.
- ರಾಜ್ಯ ಮಟ್ಟದಿಂದ 2022-23 ನೇ ಸಾಲಿನಲ್ಲಿ 18 ಸ್ಕ್ಯಾನಿಂಗ್ ಸೆಂಟರ್‌ಗಳ ತಪಾಸಣೆ ನಡೆಸಲಾಗಿದೆ ಮತ್ತು 2023-24 ನೇ ಸಾಲಿನಲ್ಲಿ 04 ಸ್ಕ್ಯಾನಿಂಗ್ ಸೆಂಟರ್‌ಗಳ ತಪಾಸಣೆ ನಡೆಸಲಾಗಿದೆ ಹಾಗೂ ಜಿಲ್ಲಾ ಮಟ್ಟದಿಂದ 4408 ಸ್ಕ್ಯಾನಿಂಗ್ ಸೆಂಟರ್‌ಗಳ ತಪಾಸಣೆ ನಡೆಸಲಾಗಿದೆ.
- ರಾಜ್ಯದಲ್ಲಿ ಈವರೆಗೆ ಪಿ.ಸಿ&ಪಿ.ಎನ್.ಡಿ.ಟಿ. ಕಾಯ್ದೆಯನ್ನು ಉಲ್ಲಂಘಿಸಿರುವ ಸ್ಕ್ಯಾನಿಂಗ್ ಸೆಂಟರ್ /ಮಾಲೀಕರು/ ವೈದ್ಯರ ವಿರುದ್ಧ ಒಟ್ಟು 100 ಪ್ರಕರಣಗಳನ್ನು ನ್ಯಾಯಾಲಯದಲ್ಲಿ ದಾವೆ ಹೂಡಲಾಗಿದ್ದು, 76 ಪ್ರಕರಣಗಳು ದಂಡವಿಧಿಸಿ ಖುಲಾಸೆಗೊಂಡಿದ್ದು, 24 ಪ್ರಕರಣಗಳು ನ್ಯಾಯಾಲಯದಲ್ಲಿ ವಿವಿಧ ಹಂತದಲ್ಲಿ ಬಾಕಿಯಿರುತ್ತವೆ.
- ತರಬೇತಿ ಹೊಂದಿರದ ಅಥವಾ ತಜ್ಞರಲ್ಲದ ವೈದ್ಯರನ್ನು ನಿಯಂತ್ರಿಸುವ ಸಲುವಾಗಿ, ಗರ್ಭಪೂರ್ವ ಮತ್ತು ಪ್ರಸವಪೂರ್ವ ಪತ್ತೆ ತಂತ್ರವಿಧಾನಗಳು (ಲಿಂಗ ಆಯ್ಕೆ ನಿಷೇಧ) (ಆರು ತಿಂಗಳ ತರಬೇತಿ) ನಿಯಮಗಳು, 2014 ರ ಪ್ರಕಾರ ಎಂ.ಬಿ.ಬಿ.ಎಸ್ ಪದವಿ ಹೊಂದಿ ಸ್ಕ್ಯಾನಿಂಗ್ ಸೆಂಟರ್ ನಡೆಸುತ್ತಿರುವ ವೈದ್ಯರಿಗೆ ಸಾಮರ್ಥ್ಯ ಆಧಾರಿತ ಪರೀಕ್ಷೆ (Competency based test) ಮತ್ತು ತರಬೇತಿಯನ್ನು ವೈದ್ಯಕೀಯ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ನಡೆಸಲಾಗುತ್ತಿದೆ.

...2

Scanned with OKEN Scanner

- ಅಲ್ಟ್ರಾಸೌಂಡ್ ತಯಾರಕರು, ಮಾರಾಟಗಾರರು ಮತ್ತು ರಿಪೇರಿ ಮಾಡುವವರನ್ನು ರಾಜ್ಯದಲ್ಲಿ ನೋಂದಾಯಿಸಿ, ಅವರಿಂದ ಮೆಷಿನ್‌ಗಳ ಮಾರಾಟದ ಬಗ್ಗೆ ತ್ರೈಮಾಸಿಕ ವರದಿಯನ್ನು ಪಡೆಯಲಾಗುತ್ತಿದೆ.
- ಐ.ಇ.ಸಿ. ಮುಖಾಂತರ ಸಾರ್ವಜನಿಕರಿಗೆ ಹೆಣ್ಣು ಭ್ರೂಣ ಪತ್ತೆ ಮತ್ತು ಹತ್ಯೆಯ ಕುರಿತು ಅರಿವು ಮೂಡಿಸಲಾಗುತ್ತಿದೆ.
- ಭ್ರೂಣ ಪತ್ತೆ ಮತ್ತು ಹತ್ಯೆ ಮಾಡುವಂತಹ ಸ್ಕ್ಯಾನಿಂಗ್ ಸೆಂಟರ್ / ಆಸ್ಪತ್ರೆ / ವೈದ್ಯರು / ದಲ್ಲಾಳಿಗಳು/ ಗರ್ಭಿಣಿಯರ ಸಂಬಂಧಿಕರ ವಿರುದ್ಧ ಮಾಹಿತಿ ನೀಡಿ, ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಲು ಸಹಕರಿಸುವ ಮಾಹಿತಿದಾರರಿಗೆ ಸರ್ಕಾರದಿಂದ ರೂ.50,000/-ಗಳ ಬಹುಮಾನ ನೀಡಲಾಗುತ್ತಿದೆ.
- ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲ್ಲೂಕಿನ ಮಳವಳ್ಳಿ ಡಯಾಗ್ನೋಸ್ಟಿಕ್ ಸೆಂಟರ್‌ನಲ್ಲಿ ಭ್ರೂಣಲಿಂಗ ಪತ್ತೆ ಮಾಡುತ್ತಿರುವುದಾಗಿ ದೂರು ಬಂದಿದ್ದು, ಈ ಹಿನ್ನಲೆಯಲ್ಲಿ ದಿನಾಂಕ: 24-08-2022 ರಂದು ರಾಜ್ಯ ಸಕ್ಷಮ ಪ್ರಾಧಿಕಾರದ ಪರವಾಗಿ ಉಪನಿರ್ದೇಶಕರು, ಪಿ.ಸಿ&ಪಿ.ಎನ್.ಡಿ.ಟಿ. ರವರು ಸದರಿ ಸೆಂಟರ್‌ನ ವಿರುದ್ಧ ಗುಪ್ತಕಾರ್ಯಾಚರಣೆ ನಡೆಸಿ, ಮಾನ್ಯ ನ್ಯಾಯಾಲಯದಲ್ಲಿ ಸದರಿ ಸೆಂಟರ್‌ನ ವಿರುದ್ಧ ಪ್ರಕರಣವನ್ನು ದಾಖಲಿಸಲಾಗಿದೆ.
- ದಿನಾಂಕ: 31-05-2023 ರಂದು ರಾಜ್ಯ ಸಕ್ಷಮ ಪ್ರಾಧಿಕಾರ ತಂಡವು ಮೈಸೂರು ಜಿಲ್ಲೆಯಲ್ಲಿ ಗುಪ್ತ ಕಾರ್ಯಾಚರಣೆಯನ್ನು ಕೈಗೊಂಡಿದ್ದು, ಸ್ವಲ್ಪದರಲ್ಲೇ ಪ್ರಕರಣದಲ್ಲಿ ತಪ್ಪಿಸಿಕೊಂಡಿದ್ದು, ನಂತರ ವಿವಿಧ ಮುದ್ರಣ ಹಾಗೂ ಸಮೂಹ ಮಾಧ್ಯಮಗಳಲ್ಲಿ ದಿನಾಂಕ: 15-10-2023 ರಂದು "ಭ್ರೂಣ ಹತ್ಯೆ ಪ್ರಕರಣ" ದ ಕುರಿತು ಈ ಹಿಂದೆ ರಾಜ್ಯ ಸಕ್ಷಮ ಪ್ರಾಧಿಕಾರದಿಂದ ತಪ್ಪಿಸಿಕೊಂಡಿದ್ದ, ಅಪರಾಧಿಗಳು ಪೋಲೀಸ್ ಇಲಾಖೆಗೆ ಸಿಕ್ಕಿಬಿದ್ದು ಈ ಪ್ರಕರಣವನ್ನು ಹೆಚ್ಚಿನ ತನಿಖೆಗಾಗಿ ಸಿ.ಐ.ಡಿ.ಗೆ ವರ್ಗಾಯಿಸಲಾಗಿದೆ.
- ಸದರಿ ಪ್ರಕರಣವು ಮೇಲ್ನೋಟಕ್ಕೆ ಸಾಬೀತಾಗಿರುವುದರಿಂದ ಮೈಸೂರಿನ ಇಬ್ಬರು ಆರೋಗ್ಯ ಇಲಾಖೆಯ ಅಧಿಕಾರಿಗಳನ್ನು ವಿಚಾರಣೆ ಬಾಕಿ ಇಟ್ಟು ಸೇವೆಯಿಂದ ಅಮಾನತ್ತುಗೊಳಿಸಲಾಗಿದೆ.
- ದಿನಾಂಕ: 29-11-2023 ರಂದು ಮಾನ್ಯ ಆರೋಗ್ಯ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಎಲ್ಲಾ ಜಿಲ್ಲೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ದಿನಾಂಕ: 31-12-2023 ರೊಳಗೆ ಎಲ್ಲಾ ಸ್ಕ್ಯಾನಿಂಗ್ ಸೆಂಟರ್/ಆಸ್ಪತ್ರೆ /ಕ್ಲಿನಿಕ್‌ಗಳನ್ನು ತಪಾಸಣೆ ನಡೆಸಿ, ಪಿ.ಸಿ ಮತ್ತು ಪಿ.ಎನ್.ಡಿ.ಟಿ. ಹಾಗೂ ಕೆ.ಪಿ.ಎಂ.ಇ. ಪರವಾನಗಿಯಿಲ್ಲದ ಸೆಂಟರ್/ ಆಸ್ಪತ್ರೆ / ಕ್ಲಿನಿಕ್‌ಗಳನ್ನು ಮುಚ್ಚಿಸಲು ಆದೇಶಿಸಿರುತ್ತಾರೆ.

**ಆಕುಕ/02/ಶೂವೇ/2023**

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

Scanned with OKEN Scanner

- **ಹಂತ-4ರನ್ವಯ** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರು ಮನೆಗೆ ತೆಗೆದುಕೊಂಡು ಹೋಗುವ ದಿನಸಿ ಹಾಗೂ ಆಹಾರ ಪದ್ಧತಿಯಡಿಯಲ್ಲಿ ಪೌಷ್ಠಿಕ ಆಹಾರವನ್ನು ಗರ್ಭಿಣಿ ಹಾಗೂ ಬಾಣಂತಿಯರಿಗೆ ನೀಡುತ್ತಿರುವರು.

- **ಹಂತ-5ರನ್ವಯ** ಮಾಹಿತಿ, ಶಿಕ್ಷಣ ಹಾಗೂ ಸಂವಹನ ಚಟುವಟಿಕೆಗಳನ್ನು ನಡೆಸಿ ಅನೀಮಿಯ ತಡೆಗಟ್ಟುವಿಕೆ ಹಾಗೂ ಪೌಷ್ಠಿಕ ಆಹಾರದ ಬಗ್ಗೆ ಜನಸಾಮಾನ್ಯರಲ್ಲಿ ಜಾಗೃತಿ ಮೂಡಿಸಲಾಗುತ್ತಿರುವುದು.

- **ಹಂತ-6ರನ್ವಯ** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಂಬಂಧಿತ ಎಲ್ಲಾ ಸಿಬ್ಬಂದಿಗಳಿಗೆ ಸಾಮರ್ಥ್ಯ ಬಲವರ್ಧನೆಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುವುದು.

**ಆಕುಕ/01/ಶೂವೇ/2023**

**(ದಿನೇಶ್ ಗುಂಡೂರಾವ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು**

Scanned with OKEN Scanner